# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **578**

ಸದಸ್ಯರ ಹೆಸರು : **ಶ್ರೀ. ಭೀಮರಾವ್ ಬಸವರಾಜು ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)**

ಉತ್ತರಿಸುವ ದಿನಾಂಕ : **11/03/2025**

ಉತ್ತರಿಸುವ ಸಚಿವರು : **ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು**

| | ಪ್ರಶ್ನೆ | ಉತ್ತರ |
|---|---|---|
| ಅ | ಪುರಸಭೆ ಮತ್ತು ನಗರಸಭೆ ಸದಸ್ಯರ ಗೌರವಧನ ಹೆಚ್ಚಳಕ್ಕೆ ಸರ್ಕಾರ ಕೈಗೊಂಡಿರುವ ಕ್ರಮವೇನು; | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು ಹಾಗೂ ಮಹಾನಗರ ಪಾಲಿಕೆಗಳ ಮೇಯರ್-ಉಪಮೇಯರ್, ಸದಸ್ಯರ ಗೌರವಧನವನ್ನು ಹೆಚ್ಚಳ ಮಾಡುವುದಕ್ಕಾಗಿ ಪರಿಶೀಲಿಸಿ, ಪ್ರಸ್ತುತ ನೀಡುತ್ತಿರುವ ಗೌರವಧನವನ್ನು ಪರಿಷ್ಕರಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಆರ್ಥಿಕ ಇಲಾಖೆಯು ದಿನಾಂಕ:02/05/2023 ಮತ್ತು ದಿನಾಂಕ:23/01/2024 ರಂದು ಅಭಿಪ್ರಾಯ ನೀಡಿದ್ದು, ಗೌರವಧನವನ್ನು ಪರಿಷ್ಕರಿಸುವ ಪ್ರಸ್ತಾವನೆಯನ್ನು ಒಪ್ಪಿರುವುದಿಲ್ಲ. ಪ್ರಸ್ತುತ ಗೌರವಧನ ಪರಿಷ್ಕರಣೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |
| ಆ | ಕೈಗೊಂಡಿದ್ದರೆ ಎಷ್ಟು ಗೌರವಧನ ಹೆಚ್ಚಳ ಮಾಡಲಾಗಿದೆ; ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹೆಚ್ಚಳ ಮಾಡಲಾಗುವುದು (ಮಾಹಿತಿ ನೀಡುವುದು)? | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು ಹಾಗೂ ಮಹಾನಗರ ಪಾಲಿಕೆಗಳ ಮೇಯರ್-ಉಪಮೇಯರ್, ಸದಸ್ಯರಿಗೆ ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ:ನಅಇ 156 ಎಂಎಲ್ಆರ್ 2015; ದಿನಾಂಕ:15/09/2016 ರಲ್ಲಿರುವಂತೆ ಆಯಾ ಸ್ಥಳೀಯ ಸಂಸ್ಥೆಯ ಸಂಪನ್ಮೂಲಗಳಿಂದ ಮಾಸಿಕ ಗೌರವಧನವನ್ನು ಪಾವತಿಸಲಾಗುತ್ತಿದೆ. |

ಸಂಖ್ಯೆ:ನಅಇ 11 ಎಲ್‌ಸಿಕ್ಯೂ 2025.

(ರಹೀಂ ಖಾನ್)

ಪೌರಾಡಳಿತ ಹಾಗೂ ಹಜ್ ಸಚಿವರು